ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕ್ರೀಡೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ  ದಿನಾಂಕ : DATE : 19/06/2019

ರಾಜ್ಯದ ಅತಿ ಹಿರಿಯ ಅಥ್ಲೆಟಿಕ್ಸ್ ಕೋಚ್ ಎನಿಸಿದ್ದ ಲಿಂಗಪ್ಪ

# ಅಥ್ಲೆಟಿಕ್ಸ್ ಕೋಚ್ ಲಿಂಗಪ್ಪ ನಿಧನ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 19/6/19

ದ್ರೋಣಾಚಾರ್ಯ ಪ್ರಶಸ್ತಿ ವಿಜೇತ, ಹಿರಿಯ ಅಥ್ಲೆಟಿಕ್ಸ್ ಕೋಚ್ ಎನ್.ಲಿಂಗಪ್ಪ ಮಂಗಳವಾರ ಬೆಳಗ್ಗೆ ತಮ್ಮ ನಿವಾಸದಲ್ಲಿ ನಿಧನರಾಗಿದ್ದಾರೆ. ಮೃತರಿಗೆ 95 ವರ್ಷ ವಯಸ್ಸಾಗಿತ್ತು. ವಯೋಸಹಜ ಸಮಸ್ಯೆಗಳಿಂದ ಲಿಂಗಪ್ಪ ಬಳಲುತ್ತಿದ್ದರು ಎಂದು ಅವರ ಕುಟುಂಬದ ಮೂಲಗಳಿಂದ ತಿಳಿದು ಬಂದಿದೆ.



ಕರ್ನಾಟಕದ ತಾರಾ ಅಥ್ಲೀಟ್‌ಗಳಾದ ಒಲಿಂಪಿಯನ್ ಅಶ್ವಿನಿ ನಾಚಪ್ಪ, ವಂದನಾ ರಾವ್, ಡಿ.ವೈ. ಬಿರಾದಾರ್, ಉದಯ ಪ್ರಭು ಮತ್ತು ಪಿ.ಸಿ. ಪೊನ್ನಪ್ಪ ಸೇರಿದಂತೆ ಇತರೆ ಅಥ್ಲೀಟ್‌ಗಳಿಗೆ ಲಿಂಗಪ್ಪ ಅವರು ಕೋಚ್ ಆಗಿದ್ದರು.

ಸ್ವತಃ ಅಥ್ಲೀಟ್ ಆಗಿದ್ದ ಲಿಂಗಪ್ಪ ನಡಿಗೆ ಸ್ಪರ್ಧೆಯಲ್ಲಿ ಹಲವು ಪ್ರಶಸ್ತಿಗಳನ್ನು ಜಯಿಸಿದ್ದರು. 1954ರಲ್ಲಿ ಮನಿಲಾದಲ್ಲಿ ನಡೆದಿದ್ದ ಏಷ್ಯನ್ ಗೇಮ್ಸ್‌ನ 10 ಕಿ.ಮೀ. ನಡಿಗೆ ಸ್ಪರ್ಧೆಯಲ್ಲಿ ಲಿಂಗಪ್ಪ ಪ್ರಮುಖ ಸುತ್ತಿಗೆ ಅರ್ಹತೆ ಪಡೆದಿದ್ದರು. ಆದರೆ ವಿವಿಧ ಕಾರಣಗಳಿಂದಾಗಿ ಸ್ಪರ್ಧೆ ನಡೆದಿರಲಿಲ್ಲ. ಅದೇ ವರ್ಷ ದೆಹಲಿಯಲ್ಲಿ ನಡೆದಿದ್ದ ಮೊದಲ ರಾಷ್ಟ್ರೀಯ ಗೇಮ್ಸ್‌ನ 10 ಕಿ.ಮೀ ನಡಿಗೆ ಸ್ಪರ್ಧೆಯಲ್ಲಿ ಲಿಂಗಪ್ಪ ಬೆಳ್ಳಿ ಜಯಿಸಿದ್ದರು. ಭಾರತ ಅಥ್ಲೆಟಿಕ್ಸ್ ತಂಡಕ್ಕೆ ಸಹಾಯಕ ಕೋಚ್ ಆಗಿಯೂ, ಅವರು ಕಾರ್ಯ ನಿರ್ವಹಿಸಿದ್ದರು.

ಕ್ರೀಡಾ ಕ್ಷೇತ್ರಕ್ಕೆ ಲಿಂಗಪ್ಪ ಅವರ ಕೊಡುಗೆಯನ್ನು ಪರಿಗಣಿಸಿ ಭಾರತ ಸರ್ಕಾರ 2014ರಲ್ಲಿ ದ್ರೋಣಾಚಾರ್ಯ ಪ್ರಶಸ್ತಿ ನೀಡಿ ಗೌರವಿಸಿತ್ತು. ಕರ್ನಾಟಕ ರಾಜ್ಯ ಸರ್ಕಾರ ಕೂಡ 1987ರಲ್ಲಿ ದಸರಾ ಪ್ರಶಸ್ತಿ, 1994ರಲ್ಲಿ ರಾಜ್ಯೋತ್ಸವ ಪ್ರಶಸ್ತಿ ನೀಡಿತ್ತು. 2002ರಲ್ಲಿ ಕರ್ನಾಟಕ ಒಲಿಂಪಿಕ್ ಸಂಸ್ಥೆ (ಕೆಒಎ)ಯ ಅತ್ಯುತ್ತಮ ತರಬೇತುದಾರ ಮತ್ತು ಅದೇ ವರ್ಷ ಕೆಂಪೇಗೌಡ ಪ್ರಶಸ್ತಿಗೂ ಲಿಂಗಪ್ಪ ಭಾಜನರಾಗಿದ್ದರು.